# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 665
ಸದಸ್ಯರ ಹೆಸರು : ಡಾ.ಚಂದ್ರಶೇಖರ್ ಬಸವರಾಜ ಪಾಟೀಲ್
ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 12-03-2025

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಜ್ಯದಲ್ಲಿ ಮಹಿಳೆಯರಿಗೆ ಉಚಿತ ಬಸ್ ಸೇವೆ ನೀಡಿರುವುದರಿಂದ ರಾಜ್ಯದ ವಿದ್ಯಾರ್ಥಿಗಳಿಗೆ ಬಸ್‌ಗಳಲ್ಲಿ ಸ್ಥಳಾವಕಾಶ ಲಭ್ಯವಾಗದೇ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳಲ್ಲಿ ಮಹಿಳೆಯರಿಗೆ ಉಚಿತ ಸಾರಿಗೆ ವ್ಯವಸ್ಥೆ ಕಲ್ಪಿಸಿರುವುದರಿಂದ ಸರ್ಕಾರಿ ಬಸ್‌ಗಳಲ್ಲಿ ಸಂಚರಿಸುವವರ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದ್ದು, ಇದರಿಂದಾಗಿ ಶಾಲಾ ಮಕ್ಕಳಿಗೆ ಅನಾನುಕೂಲವಾಗುತ್ತಿರುವ ಬಗ್ಗೆ ಕೆಲವು ಸ್ಥಳಗಳಲ್ಲಿ ವರದಿಯಾಗಿದ್ದು, ಅಂತಹ ಸ್ಥಳಗಳನ್ನು ಗುರುತಿಸಿ ಅ ಸ್ಥಳಗಳಿಗೆ ನಿಗಮದ ಸಿಬ್ಬಂದಿಗಳನ್ನು ಮೇಲ್ವಿಚಾರಣೆಗಾಗಿ ನಿಯೋಜಿಸಲಾಗುತ್ತಿದೆ ಹಾಗೂ ಬೇಡಿಕೆಗೆ ಅನುಗುಣವಾಗಿ ಹೆಚ್ಚುವರಿ ಸರತಿಗಳನ್ನು ಅಳವಡಿಸಲು ಕ್ರಮವಹಿಸಲಾಗುತ್ತಿದೆ.<br><br>ಶಾಲಾ/ಕಾಲೇಜು ವಿದ್ಯಾರ್ಥಿಗಳಿಗೆ ಅವರ ಶಾಲಾ ಕಾಲೇಜು ಸಮಯಕ್ಕೆ ಅವಶ್ಯಕತೆಗೆ ಅನುಗುಣವಾಗಿ ಸುತ್ತುವಳಿಗಳು/ಬಸ್ಸುಗಳನ್ನು ಕಲ್ಪಿಸಲು **ಈ ಕೆಳಕಂಡ ಅಂಶಗಳನ್ನು ಅನುಸರಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಲಾಗಿದೆ:-**<br><br>• ಗ್ರಾಮೀಣ ಪ್ರದೇಶಗಳ ವಿಭಾಗದ ವ್ಯಾಪ್ತಿಯಲ್ಲಿ ಬರುವ ಶಾಲಾ/ಕಾಲೇಜುಗಳ ಪ್ರಾಂಶುಪಾಲರು/ ಮುಖ್ಯಸ್ಥರುಗಳನ್ನು ಸಂಪರ್ಕಿಸಿ, ಶಾಲಾ/ಕಾಲೇಜುಗಳ ಸಮಯಗಳನ್ನು ತಿಳಿದುಕೊಂಡು ಸದರಿ ಸಮಯಕ್ಕೆ ಸಾರಿಗೆಗಳನ್ನು ಕಾರ್ಯಾಚರಿಸಲು ಸೂಕ್ತ ಕ್ರಮ ಕೈಗೊಳ್ಳುವುದು<br>• ಶಾಲಾ/ಕಾಲೇಜು ವಿದ್ಯಾರ್ಥಿಗಳು ಹೆಚ್ಚಿಗೆ ಸೇರುವ ಬಸ್ ನಿಲ್ದಾಣ/ಜಂಕ್ಷನ್‌ಗಳಲ್ಲಿ ಸಾರಿಗೆ ಸೇವೆಗಳ ಮೇಲ್ವಿಚಾರಣೆಗೆ ಸಂಚಾರ ನಿಯಂತ್ರಕರು/ಇತರೆ ಮೇಲ್ವಿಚಾರಕರನ್ನು ತಪ್ಪದೇ ನಿಯೋಜಿಸಿ ಸುಗಮ ಕಾರ್ಯಾಚರಣೆ ಬಗ್ಗೆ ನಿಗಾ ವಹಿಸುವುದು. |
| ಆ. | ಬಂದಿದ್ದರೆ, ವಿದ್ಯಾರ್ಥಿಗಳ ಸಮಸ್ಯೆಯನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು? | |
| ಇ. | ವಿದ್ಯಾರ್ಥಿಗಳ ಸಲುವಾಗಿ ಪ್ರತ್ಯೇಕ ಹೆಚ್ಚುವರಿ ಬಸ್‌ಗಳನ್ನು ಒದಗಿಸಲು ಸರ್ಕಾರ ಚಿಂತನೆ ನಡೆಸಿದೆಯೇ? | |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | • ವಿಭಾಗದ ಎಲ್ಲಾ ಚಾಲನಾ ಸಿಬ್ಬಂದಿಗಳಿಗೆ ಶಾಲಾ ಕಾಲೇಜು ವಿದ್ಯಾರ್ಥಿಗಳು ಬಸ್ಸುಗಳಲ್ಲಿ ಪ್ರಯಾಣಿಸಲು ಅನುವಾಗಲು ನಿಗದಿತ ಬಸ್ ನಿಲ್ದಾಣಗಳಲ್ಲಿ ನಿಲುಗಡೆ ನೀಡಿ ಅವರನ್ನು ಹತ್ತಿಸಿ/ಇಳಿಸಿಕೊಂಡು ಮುಂದೆ ಹೋಗುವುದರ ಜೊತೆಗೆ ವಿದ್ಯಾರ್ಥಿಗಳೊಂದಿಗೆ ಸೌಜನ್ಯಯುತವಾಗಿ ವರ್ತಿಸಲು ತಿಳುವಳಿಕೆ ನೀಡುವುದು.<br><br>**ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ:**<br>• ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಿಂದ ಸಾರ್ವಜನಿಕ ಪ್ರಯಾಣಿಕರ/ವಿದ್ಯಾರ್ಥಿ ಸಮುದಾಯದ ಬೇಡಿಕೆ ಹಾಗೂ ಒತ್ತಡಕ್ಕನುಗುಣವಾಗಿ ಮೂಲಭೂತ ಸೌಕರ್ಯಗಳ ಲಭ್ಯತೆಗನುಗುಣವಾಗಿ ಹೊಸ ಮಾರ್ಗಗಳನ್ನು ಪರಿಚಯಿಸುವುದು, ಹಾಲಿಯಿರುವ ಮಾರ್ಗಗಳಲ್ಲಿ ಸಾರಿಗೆಗಳನ್ನು ಹೆಚ್ಚಿಸುವುದು ಮತ್ತು ಪ್ರಯಾಣಿಕರ ಸಂಚಾರ ದಟ್ಟಣೆಗನುಗುಣವಾಗಿ ಸಾರಿಗೆಗಳನ್ನು ಪರಿಷ್ಕರಿಸಿ ಕಾರ್ಯಾಚರಣೆಗೊಳಿಸಲಾಗುತ್ತಿದೆ.<br>• ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು, ಬೃಹತ್‌ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಿಂದ 25.0 ಕಿ.ಮೀ.ವರೆಗೆ ಕಾರ್ಯಾಚರಣೆ ವ್ಯಾಪ್ತಿಯನ್ನು ಹೊಂದಿದ್ದು, ಕಾರ್ಯಾಚರಣೆ ವ್ಯಾಪ್ತಿಗೆ ಒಳಪಡುವ ಹಾಗೂ ಬಸ್ಸುಗಳ ಸಂಚಾರಕ್ಕೆ ಸೂಕ್ತ ರಸ್ತೆಗಳಿರುವ ಎಲ್ಲಾ ಪ್ರದೇಶಗಳಿಗೂ ಅವಶ್ಯಕತೆಗನುಗುಣವಾಗಿ ಸಾರಿಗೆ ಸೌಲಭ್ಯವನ್ನು ಒದಗಿಸುತ್ತಿದೆ.<br>• ಈ ನಿಟ್ಟಿನಲ್ಲಿ ಪ್ರತಿದಿನ ಹವಾನಿಯಂತ್ರಿತ ಸಾರಿಗೆಗಳನ್ನು ಒಳಗೊಂಡಂತೆ 5867 ಅನುಸೂಚಿಗಳನ್ನು 61631 ಸುತ್ತುವಳಿಗಳೊಂದಿಗೆ 12.06 ಲಕ್ಷ ಕಿ.ಮೀ.ಗಳಲ್ಲಿ ಬೆಂಗಳೂರು ನಗರ ಹಾಗೂ ಹೊರವಲಯದ ಪ್ರಯಾಣಿಕರ ದಟ್ಟಣೆ/ ಅವಶ್ಯಕತೆಗನುಗುಣವಾಗಿ ಕಾರ್ಯಾಚರಣೆ ಮಾಡುತ್ತಿದ್ದು, ಸರಾಸರಿ 40 ಲಕ್ಷ ಪ್ರಯಾಣಿಕರು ಪ್ರಯಾಣಿಸುತ್ತಿದ್ದಾರೆ. |

| ಕ್ರ. ಸಂ. | ಪ್ರಶ್ನೆ | ಉತ್ತರ |
| --- | --- | --- |
| | | ಪ್ರಸ್ತುತ, ಕಲ್ಪಿಸುತ್ತಿರುವ ಸಾರಿಗೆಗಳು ಶಾಲಾ/ಕಾಲೇಜು ವಿದ್ಯಾರ್ಥಿಗಳ ಹಾಗೂ ಸಾರ್ವಜನಿಕ ಪ್ರಯಾಣಿಕರ ಬೇಡಿಕೆಗೆ ಅನುಗುಣವಾಗಿ ಇರುತ್ತದೆ. ಆದಾಗ್ಯೂ, ಹೆಚ್ಚುವರಿ ಬೇಡಿಕೆ ಬಂದಲ್ಲಿ, ಬೇಡಿಕೆಗೆ ಅನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಕ್ರೂಢೀಕರಿಸಿಕೊಂಡು ಮಾರ್ಗ ಸಮೀಕ್ಷೆ ಕೈಗೊಂಡು ಪರಿಶೀಲಿಸಿ ಹಂತ ಹಂತವಾಗಿ ಸಾರಿಗೆ ಸೌಲಭ್ಯವನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತದೆ.<br><br>**ಸಾರಿಗೆ ಸಂಸ್ಥೆಗಳಿಂದ 2023-24ರ ಪೂರ್ವದ 04 ವರ್ಷಗಳಲ್ಲಿ ಹೊಸ ಬಸ್ಸುಗಳನ್ನು ಖರೀದಿಸಿರಲಿಲ್ಲ.**<br><br>ಶಕ್ತಿ ಯೋಜನೆಯ ಜಾರಿಗೂ ಮೊದಲು ಮತ್ತು ನಂತರದ ನಾಲ್ಕು ಸಾರಿಗೆ ಕಾರ್ಯಚರಣೆಯ ವಿವರಗಳು ಕೆಳಗಿನಂತಿರುತ್ತದೆ:<br><br>**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ:**<br>ನಿಗಮದಲ್ಲಿ ಶಕ್ತಿ ಯೋಜನೆ ಜಾರಿಗೂ ಮೊದಲು ವತಿಯಿಂದ 45255 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು, ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ 50598 ಸರತಿಗಳನ್ನು ಮಾಡಲಾಗುತ್ತಿದೆ. ಪ್ರತಿದಿನ 5343 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>**ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ:**<br>ಸಂಸ್ಥೆಯಲ್ಲಿ ಶಕ್ತಿ ಯೋಜನೆ ಜಾರಿಗೆ ಮೊದಲು 56646 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು, ಶಕ್ತಿ ಯೋಜನೆ ಜಾರಿಯಾದ ನಂತರದಲ್ಲಿ 61631 ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು, ಪ್ರತಿದಿನ 4985 ಹೆಚ್ಚುವರಿ ಸುತ್ತುವಳಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>**ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ:**<br>ಸಂಸ್ಥೆಯಲ್ಲಿ ಶಕ್ತಿ ಯೋಜನೆ ಜಾರಿಗೂ ಮೊದಲು 4567 ಅನುಸೂಚಿಗಳಿಂದ 34676 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಶಕ್ತಿ ಯೋಜನೆ ಜಾರಿ ನಂತರದಲ್ಲಿ ಅಂದರೆ ಜನೇವರಿ-2025 ರ ಮಾಹೆಯ ಅಂತ್ಯಕ್ಕೆ 4763 ಅನುಸೂಚಿಗಳಿಂದ 37453 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿ |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|

ದಿನ 196 ಅನುಸೂಚಿಗಳನ್ನು ಹಾಗೂ ಒಟ್ಟು 2777 ಸರತಿಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ.

ವಿದ್ಯಾರ್ಥಿ/ಸಾರ್ವಜನಿಕರಿಂದ ಸಾರಿಗೆ ಸೌಲಭ್ಯ ಕೋರಿ ಬಂದ ಬೇಡಿಕೆ/ಅವಶ್ಯಕತೆಗೆ ಅನುಗುಣವಾಗಿ ಸಾರಿಗೆಗಳನ್ನು ಹೆಚ್ಚಿಸಿ ಕಾರ್ಯಾಚರಿಸುವ ಕ್ರಮ ನಿರಂತರ ಜಾರಿಯಲ್ಲಿದೆ.

**ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ:**

ನಿಗಮದಲ್ಲಿ ಶಕ್ತಿ ಯೋಜನೆ ಜಾರಿಗೂ ಮೊದಲು 4028 ಅನುಸೂಚಿಗಳಿಂದ 22214 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಶಕ್ತಿ ಯೋಜನೆ ಜಾರಿ ನಂತರದಲ್ಲಿ 4636 ಅನುಸೂಚಿಗಳಿಂದ 27200 ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿ ದಿನ 608 ಅನುಸೂಚಿಗಳನ್ನು ಹಾಗೂ ಒಟ್ಟು 4986 ಸರತಿಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ.

ಪ್ರತಿ ತಿಂಗಳು ಮೊದಲನೇಯ ಸೋಮವಾರದಂದು ಎಲ್ಲಾ ವಿಭಾಗಗಳಲ್ಲಿ ಫೋನ್-ಇನ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಸದರಿ ಕಾರ್ಯಕ್ರಮದಲ್ಲಿ ಸ್ವೀಕೃತವಾಗುವ ಮನವಿ/ಅಹವಾಲುಗಳನ್ನು ಪಡೆದುಕೊಂಡು ಕ್ರಮ ಜರುಗಿಸಲಾಗುತ್ತಿದೆ.

ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಲ್ಲಿ 2023-24 ಮತ್ತು 2024-25ನೇ ಸಾಲಿನಲ್ಲಿ ನೂತನವಾಗಿ ಖರೀದಿಸಿರುವ / ಖರೀದಿಸಲು ಯೋಜಿಸಿರುವ ಬಸ್ಸುಗಳ ಸಂಖ್ಯೆ ಕೆಳಕಂಡಂತಿದೆ:-

| **ನಿಗಮ/ ಸಂಸ್ಥೆ** | **2023-24** | **2024-25** | **ಒಟ್ಟು** |
|---|---|---|---|
| ಕ.ರಾ.ರ.ಸಾ.ನಿಗಮ | 467 | 698 | 1165 |
| ಬೆಂ.ಮ.ಸಾ.ಸಂಸ್ಥೆ | 345 | 1526 | 1871 |
| ವಾ.ಕ.ರ.ಸಾ.ಸಂಸ್ಥೆ | 296 | 560 | 856 |
| ಕ.ಕ.ರ.ಸಾ.ನಿಗಮ | 720 | 303 | 1023 |
| **ಒಟ್ಟು** | **1828** | **3087** | **4915** |

ಸಂಖ್ಯೆ: ಟಿಡಿ 43 ಟಿಸಿಕ್ಯೂ 2025

(ರಾಮಲಿಂಗಾರೆಡ್ಡಿ)

ಸಾರಿಗೆ ಮತ್ತು ಮುಜರಾಯಿ ಸಚಿವರು